153 ನೇ೬ ನ=7
Sl.no. 118
LRR 2...

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎಸ್.ಎಲ್.ಭೋಜೇಗೌಡ ಇವರು ನಿಯಮ 72 ರಡಿಯಲ್ಲಿ ನೀಡಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ.**

**ರಾಜ್ಯದ ಮಾನ್ಯ ಗೌರವಾನ್ವಿತ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಮತ್ತು ಮುಜರಾಯಿ ಸಚಿವರು ಹಾಗೂ ರಾಮನಗರ ಜಿಲ್ಲಾ ಉಸ್ತುವಾರಿ ಸಚಿವರು ರಾಮನಗರ ಜಿಲ್ಲೆ, ಚನ್ನಪಟಣ ತಾಲ್ಲೂಕಿನಲ್ಲಿ "ಬಾಗಿಲಿಗೆ ಬಂತು ಸರ್ಕಾರ ಸೇವೆಗೆ ಇರಲಿ ಸಹಕಾರ" ಎಂಬ ಹೆಸರಿನಲ್ಲಿ ಹಲವಾರು ಸಭೆಗಳನ್ನು ನಡೆಸಿ ಚನ್ನಪಟ್ಟಣ ಕ್ಷೇತ್ರವನ್ನು ಮಾದರಿ ಕ್ಷೇತ್ರವನ್ನಾಗಿ ಮಾಡುವುದಾಗಿ ಸಾರ್ವಜನಿಕ ಸಭೆಯಲ್ಲಿ ಭರವಸೆ ನೀಡಿರುವ ಬಗ್ಗೆ ಪತ್ರಿಕೆಗಳಲ್ಲಿ ಹಾಗೂ ದೃಶ್ಯ ಮಾಧ್ಯಮದಲ್ಲಿ ವರದಿಯಾಗಿರುತ್ತದೆ ಆದರೆ ಹಿಂದಿನ ಸರ್ಕಾರದಲ್ಲಿ ಚನ್ನಪಟ್ಟಣ ತಾಲ್ಲೂಕಿನ 183 ದೇವಸ್ಥಾನಗಳ ಜೀರ್ಣೋದ್ಧಾರ ಹಾಗೂ ಮೂಲಭೂತ ಸೌಕರ್ಯ ಕಾಮಗಾರಿಗಳಿಗೆ ಸರ್ಕಾರದ ಆದೇಶ ಹೊರಡಿಸಲಾಗಿತ್ತು, ಅದರಂತೆ ಈಗಿನ ಸರ್ಕಾರದ ಮಾನ್ಯ ಮುಜರಾಯಿ ಸಚಿವರಿಗೆ ತಡೆಹಿಡಿದಿರುವ ಆದೇಶವನ್ನು ತೆರವುಗೊಳಿಸಲು ಸ್ಥಳೀಯ ಶಾಸಕರು ಮನವಿ ಮಾಡಿದಾಗ ಮಾನ್ಯ ಸಚಿವರು ತೆರವುಗೊಳಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದ್ದರು, ಮುಂದುವರೆದು ಇದೇ ವಿಷಯವನ್ನು ಸದನದಲ್ಲಿ ಪ್ರಸ್ತಾಪಿಸಿದಾಗ ಪರಿಗಣಿಸಲಾಗುವುದು, ಪರಿಶೀಲಿಸಲಾಗುವುದು ಮತ್ತು ಕ್ರಮವಹಿಸಲಾಗುವುದು ಎಂಬುದಾಗಿ ಕಳೆದ ಒಂದು ವರ್ಷದಿಂದ ವಿಳಂಬ ಮಾಡುತ್ತಿರುವುದರಿಂದ ಚನ್ನಪಟ್ಟಣ ತಾಲ್ಲೂಕಿನ ಅನೇಕ ದೇವಾಲಯಗಳ ಜೀರ್ಣೋದ್ಧಾರ ಹಾಗೂ ಮೂಲಭೂತ ಸೌಕರ್ಯ ಕಾಮಗಾರಿಗಳು ಕುಂಠಿತಗೊಂಡಿದ್ದು, ಮುಜರಾಯಿ ಇಲಾಖೆಯಲ್ಲಿಯೇ ಈ ರೀತಿ ಆದೇಶಗಳನ್ನು ತಡೆಹಿಡಿರುವುದರಿಂದ ಮಾನ್ಯ ಗೌರವಾನ್ವಿತ ಉಪ ಮುಖ್ಯಮಂತ್ರಿಗಳು ಹಾಗೂ ರಾಮನಗರ ಜಿಲ್ಲಾ ಉಸ್ತುವಾರಿ ಮತ್ತು ಮುಜರಾಯಿ ಸಚಿವರು ಯಾವ ಮಾದರಿಯಲ್ಲಿ ಚನ್ನಪಟ್ಟಣ ವಿಧಾನ ಸಭಾ ಕ್ಷೇತ್ರವನ್ನು ಅಭಿವೃದ್ಧಿ ಪಡಿಸಲು ಉದ್ದೇಶಿಸಿರುತ್ತಾರೆ ಎಂಬುದರ ಸಂಪೂರ್ಣ ಮಾಹಿತಿಯನ್ನು ಒದಗಿಸುವ ಕುರಿತು ನಿಯಮ 72ರ ಅಡಿಯಲ್ಲಿ ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರ ಗಮನ ಸೆಳೆದಿರುತ್ತಾರೆ.**

**ಉತ್ತರ:**

2022-2023ನೇ ಸಾಲಿನಲ್ಲಿ ಸನ್ಮಾನ್ಯ ಮುಖ್ಯಮಂತ್ರಿಯವರ ಅನುಮೋದನೆಯಂತೆ ಹಾಗೂ ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ದಿನಾಂಕ:05.05.2022ರ ಸಹಮತಿಯಂತೆ ಸರ್ಕಾರದ ಆದೇಶ ಸಂಖ್ಯೆ:ಕಂಇ 243 ಮುಅಬಿ 2022, ದಿನಾಂಕ:08.07.2022ರಲ್ಲಿ ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ 183 ದೇವಸ್ಥಾನಗಳ ಜೀರ್ಣೋದ್ಧಾರ ಕಾಮಗಾರಿಗಳಿಗೆ ರೂ.10.00 ಕೋಟಿಗಳ ಕಾಮಗಾರಿಗೆ ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಲಾಗಿತ್ತು. **ಆದರೆ ಹೀಗೆ ಆಡಳಿತಾತ್ಮಕ ಮಂಜೂರಾತಿ ನೀಡಲಾಗಿದ್ದ ಆದೇಶವನ್ನು ದಿನಾಂಕ: 13.07.2022ರ ಆದೇಶದಲ್ಲಿ ಮಂಜೂರಾತಿ ನೀಡಿದ 5 ದಿನಗಳಲ್ಲಿ ತಡೆಹಿಡಿಯುವ ಆದೇಶ ನೀಡಿರುತ್ತದೆ.**

ಅಲ್ಲದೇ, ಸರ್ಕಾರದ ಆದೇಶ ಸಂಖ್ಯೆ:ಕಂಇ 296 ಮುಅಬಿ 2022, ದಿನಾಂಕ:18.08.2022ರಲ್ಲಿ ರೂ.100.00 ಲಕ್ಷಗಳ ಮೊತ್ತದಲ್ಲಿ ಕಳೆದ ಸಾಲಿನಲ್ಲಿ ಆಡಳಿತಾತ್ಮಕ ಮಂಜೂರಾತಿ ನೀಡಲಾಗಿದ್ದು, **ಅನುದಾನ ಬಿಡುಗಡೆ ಮಾಡಲಾಗಿರುವುದಿಲ್ಲ. ಆದ್ದರಿಂದ ತಡೆಹಿಡಿಯುವ ಪ್ರಶ್ನೆ ಉದ್ಭವಿಸುವುದಿಲ್ಲ.**

ಸರ್ಕಾರವು ರಾಮನಗರ ಜಿಲ್ಲೆ, ಚನ್ನಪಟ್ಟಣ ವಿಧಾನಸಭಾ ಕ್ಷೇತ್ರಕ್ಕೆ ಸರ್ಕಾರದ ಆದೇಶ ಸಂಖ್ಯೆ:ಕಂಇ 208 ಮುಅಬಿ 2022, ದಿನಾಂಕ:11.07.2022ರಲ್ಲಿ ರೂ.200.00 ಲಕ್ಷಗಳ ಅನುದಾನದಲ್ಲಿ ಕಾಮಗಾರಿ ಕೈಗೊಳ್ಳಲು ಆಡಳಿತಾತ್ಮಕ ಮಂಜೂರಾತಿ ನೀಡಲಾಗಿದ್ದು, ಇದರಲ್ಲಿ ಶೇ.50 ರಷ್ಟು ಅಂದರೆ ರೂ. 100.00 ಲಕ್ಷಗಳನ್ನು ಸರ್ಕಾರದ ಆದೇಶ ಸಂಖ್ಯೆ:RD/294/MABI/2022 ದಿನಾಂಕ: 27.07.2022ರಲ್ಲಿ ಬಿಡುಗಡೆ ಮಾಡಲಾಗಿದೆ.

ಸರ್ಕಾರದಿಂದ ಅನುದಾನ ಮಂಜೂರಾಗಿ ಶೇ.50 ರಷ್ಟು (ಭಾಗಶಃ) ಅನುದಾನ ಬಿಡುಗಡೆಯಾಗಿರುವ ಕಾಮಗಾರಿಗಳಿಗೆ ಬಿಡುಗಡೆಯಾದ ಹಣ (ಅನುದಾನ)ಕ್ಕೆ ಅಂದಾಜು ಪಟ್ಟಿ ಪಡೆದು ನಿಯಮಾನುಸಾರ ಆಡಳಿತಾತ್ಮಕ ಮಂಜೂರಾತಿ ನೀಡಿ ಕಾಮಗಾರಿ ಕೈಗೊಂಡು ಹಣ ಬಿಡುಗಡೆ ಮಾಡುವುದು, ನಂತರ ಕಾಮಗಾರಿ ಪೂರ್ಣಗೊಳಿಸಲು ಹೆಚ್ಚುವರಿ ಅನುದಾನದ ಅವಶ್ಯಕತೆ ಕಂಡು ಬಂದಲ್ಲಿ ಹಣ(ಅನುದಾನ)ದ ಅವಶ್ಯಕತೆಯನ್ನು ಜಿಲ್ಲಾಧಿಕಾರಿಗಳು ಖಚಿತ ಪಡಿಸಿಕೊಂಡು ಬಳಕೆ ಅರ್ಹತಾ ಪತ್ರದೊಂದಿಗೆ ಸ್ಪಷ್ಟ ಅಭಿಪ್ರಾಯದೊಂದಿಗೆ ಸರ್ಕಾರಕ್ಕೆ ಅನುದಾನ ಕೋರಿ ಪ್ರಸ್ತಾವನೆ ಸಲ್ಲಿಸುವಂತೆ ಆಯುಕ್ತರ ಕಛೇರಿಯ **ಪತ್ರ ಸಂಖ್ಯೆ:CNR2/256/2023 ದಿನಾಂಕ:25.09.2023ರ** ಪತ್ರದಲ್ಲಿ ಎಲ್ಲಾ ಜಿಲ್ಲಾಧಿಕಾರಿಗಳನ್ನು ಕೋರಲಾಗಿರುತ್ತದೆ.

ಕಂಇ 110 ಮುಸಪ್ರು 2024

**(ರಾಮಲಿಂಗಾರೆಡ್ಡಿ)**
ಸಾರಿಗೆ ಮತ್ತು ಧಾರ್ಮಿಕ ದತ್ತಿ ಸಚಿವರು